# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 1028 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 27.12.2022 |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಹಿಳಾ ಸಬಲೀಕರಣಕ್ಕಾಗಿ ರಾಜ್ಯ ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳ್ಯಾವುವು; (ಸಂಪೂರ್ಣ ಮಾಹಿತಿ ಒದಗಿಸುವುದು) | ಮಾಹಿತಿಯನ್ನು ಅನುಬಂಧ-01 ರಲ್ಲಿ ಒದಗಿಸಿದೆ |
| ಆ) | ಕಳೆದ ಮೂರು ವರ್ಷಗಳಲ್ಲಿ ಯಾವ ಯೋಜನೆಗಳಡಿ ಮತ್ತು ಎಷ್ಟು ಜನ ಫಲಾನುಭವಿಗಳಿಗೆ ಈ ಯೋಜನೆಯ ಲಾಭವನ್ನು ದೊರಕಿಸಿಕೊಡಲಾಗಿದೆ; | ಮಾಹಿತಿಯನ್ನು ಅನುಬಂಧ-02 ರಲ್ಲಿ ಒದಗಿಸಿದೆ |
| ಇ) | ಕಳೆದ ಮೂರು ವರ್ಷಗಳಲ್ಲಿ ಆಯವ್ಯಯದಲ್ಲಿ ಮೀಸಲಿರಿಸಿಟ್ಟ ಹಣವೆಷ್ಟು; ಆ ಪೈಕಿ ಖರ್ಚಾದ ಹಣವೆಷ್ಟು; (ಮಾಹಿತಿ ನೀಡುವುದು) | |

**ಸಂಖ್ಯೆ: ಮಮಇ 96 ಸ್ತ್ರೀಮರ 2022**

Halappa B.A

**(ಆಚಾರ ಹಾಲಪ್ಪ ಬಸಪ್ಪ)**

ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

# ಅನುಬಂಧ-1

## ಮಹಿಳಾ ಸಬಲೀಕರಣಕ್ಕಾಗಿ ಹಮ್ಮಿಕೊಂಡಿರುವ ಯೋಜನೆಗಳು

### ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

1. **ಸಾಂತ್ವನ ಯೋಜನೆ:-** ಸಮಾಜದಲ್ಲಿ ವರದಕ್ಷಿಣೆ ಕಿರುಕುಳ, ಲೈಂಗಿಕ ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರಕ್ಕೊಳಗಾದ ಮಹಿಳೆಯರಿಗೆ ಕಾನೂನು ನೆರವು ಹಾಗೂ ಆಪ್ತ ಸಮಾಲೋಚನೆಯನ್ನು ಒದಗಿಸಲಾಗುತ್ತಿದೆ. ಪ್ರಸ್ತುತ ರಾಜ್ಯದಲ್ಲಿ 178 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

2. **ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ನಿಯಮ 2006:-** ಕುಟುಂಬದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯ ಉಂಟಾದಾಗ, ನ್ಯಾಯಾಲಯದ ಮುಖಾಂತರ ಮಹಿಳೆಯರಿಗೆ ಆರ್ಥಿಕ ಪರಿಹಾರ, ರಕ್ಷಣಾ ಆದೇಶ, ವಾಸದ ಆದೇಶ, ಮಕ್ಕಳ ವಶ, ತಾತ್ಕಾಲಿಕ ಆಶ್ರಯ, ವೈದ್ಯಕೀಯ ಹಾಗೂ ಕಾನೂನು ನೆರವನ್ನು ಒದಗಿಸುತ್ತಿದೆ.

3. **ಸ್ವಾಧಾರ ಗೃಹ:-** ಸಂಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ತಾತ್ಕಾಲಿಕ ಆಶ್ರಯ, ವೈದ್ಯಕೀಯ ಸೇವೆ, ಆಪ್ತ ಸಮಾಲೋಚನೆ ಮತ್ತು ಕಾನೂನು ನೆರವು ಒದಗಿಸಲಾಗುತ್ತಿದೆ. ಪ್ರಸ್ತುತ ರಾಜ್ಯಾದ್ಯಂತ 52 ಸ್ವಾಧಾರ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

4. **ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ನಿವಾರಣೆ ಯೋಜನೆ:** ಮಹಿಳೆಯರ ಮತ್ತು ಮಕ್ಕಳ ಸಾಗಣೆಯು ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ನಡೆಯುತ್ತಿದ್ದು ಇದು ಆತಂಕಕಾರಿಯಾದ ಬೆಳವಣಿಗೆಯಾಗಿರುತ್ತದೆ. ಈ ವ್ಯವಸ್ಥಿತ ಪಿಡುಗನ್ನು ನಿಯಂತ್ರಿಸಲು ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಮಟ್ಟದಲ್ಲಿ ಜಾಗೃತಿಯನ್ನು ಮೂಡಿಸುವುದು ಅಗತ್ಯವೆಂದು ಇಲಾಖೆಯು ಭಾವಿಸಿ ಮಹಿಳೆಯರ ಮತ್ತು ಮಕ್ಕಳ ಸಾಗಣೆ ನಿವಾರಣೆ ಯೋಜನೆಯನ್ನು 2006-07 ರಲ್ಲಿ ಜಾರಿಗೆ ತರಲಾಗಿದೆ. ಈ ಯೋಜನೆಯು ಅರಿವು ಮೂಡಿಸುವ ಕಾರ್ಯಕ್ರಮವಾಗಿರುತ್ತದೆ.

5. **ಉಜ್ವಲ ಯೋಜನೆ :** ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯವು ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟಲು, ಸಾಗಾಣಿಕೆಗೆ ಹಾಗೂ ವಾಣಿಜ್ಯ ಲೈಂಗಿಕ ದುರುಪಯೋಗಕ್ಕೆ ಒಳಪಟ್ಟವರನ್ನು ರಕ್ಷಿಸಲು, ಇವರಿಗೆ ಪುನರ್‌ವಸತಿ ಕಲ್ಪಿಸಲು ಮತ್ತು ಕುಟುಂಬದವರೊಂದಿಗೆ ಪುನರ್ ವಿಲೀನಗೊಳಿಸಲು ಉಜ್ವಲ ಎಂಬ ಸಮಗ್ರ ಯೋಜನೆಯನ್ನು ರೂಪಿಸಿರುತ್ತದೆ. ಸದರಿ ಯೋಜನೆಯನ್ನು 15 ಸ್ವಯಂ ಸೇವಾ ಸಂಸ್ಥೆಗಳ ಮೂಲಕ 11 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

6. **ಸ್ವೀಕಾರ ಕೇಂದ್ರ ಹಾಗೂ ರಾಜ್ಯ ಮಹಿಳಾ ನಿಲಯ:-** ಅನೈತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956 ನಿಯಮ 1989ರ ಅಡಿ ರಾಜ್ಯದಲ್ಲಿ 04 ಸ್ವೀಕಾರ ಕೇಂದ್ರಗಳು ಮತ್ತು 08 ರಾಜ್ಯ ಮಹಿಳಾ ನಿಲಯಗಳು ಸರ್ಕಾರದಿಂದ ನಡೆಸಲ್ಪಡುತ್ತಿವೆ. ಸ್ವೀಕಾರ ಕೇಂದ್ರಗಳು 18 ವರ್ಷದ ಮೇಲ್ಪಟ್ಟ ಮಹಿಳೆಯರಿಗೆ ಅಲ್ಪಾವಧಿ ಪುನರ್ವಸತಿ ಕೇಂದ್ರಗಳಾಗಿ ಹಾಗೂ ರಾಜ್ಯ ಮಹಿಳಾ ನಿಲಯಗಳು ದೀರ್ಘಾವಧಿ ಪುನರ್ವಸತಿ ಕೇಂದ್ರಗಳಾಗಿರುತ್ತವೆ. ಆಶ್ರಯ ಮತ್ತು ರಕ್ಷಣೆ ಅಗತ್ಯವಿರುವ ಮಹಿಳೆಯರು ಸ್ವ-ಇಚ್ಛೆಯಿಂದ, ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ, ಯಾವುದೇ ವ್ಯಕ್ತಿಗಳ ಮುಖಾಂತರ, ಪೊಲೀಸರ ಮುಖಾಂತರ ಹಾಗೂ ಅನೈತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956ರ ಅಡಿಯಲ್ಲಿ ನ್ಯಾಯಾಲಯದಿಂದ ಪ್ರಕರಣಗಳಡಿ ದಾಖಲಿಸಲ್ಪಟ್ಟ ಮಹಿಳೆಯರಿಗೆ ಪುನರ್ವಸತಿ ಕಲ್ಪಿಸಲಾಗುತ್ತಿದೆ.

7. **ಸ್ತ್ರೀಶಕ್ತಿ ಯೋಜನೆ:** ಸ್ವ-ಸಹಾಯ ಗುಂಪುಗಳ ಮೂಲಕ ಮಹಿಳೆಯರ ಸಬಲೀಕರಣದ ಧ್ಯೇಯದೊಂದಿಗೆ 2000-01ನೇ ಸಾಲಿನಲ್ಲಿ ಸ್ತ್ರೀಶಕ್ತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಯಿತು. ಸ್ತ್ರೀಶಕ್ತಿ ಯೋಜನೆಯಡಿ ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಸಮಾಜದ ಬಡ ಕುಟುಂಬದ, ಸಾಮಾಜಿಕ ಅಥವಾ ಆರ್ಥಿಕ ಹಿನ್ನೆಲೆಯುಳ್ಳ ಸಮಾನ ಮನಸ್ಸಿನ ಪರಿಸ್ಪರ ವಿಶ್ವಾಸದಿಂದ ಕೂಡಿರುವ ಭೂರಹಿತ ಮಹಿಳಾ ಕೃಷಿ ಕಾರ್ಮಿಕರು, ಪರಿಶಿಷ್ಟ ಜಾತಿ ಅಥವಾ ವರ್ಗಕ್ಕೆ ಸೇರಿದ ಕುಟುಂಬದ 15-20 ಮಹಿಳೆಯರನ್ನು ಒಟ್ಟು ಸೇರಿಸಿ 165960 ಲಕ್ಷ ಗುಂಪುಗಳನ್ನು ರಚಿಸಲಾಗಿದೆ. ಒಟ್ಟು ಇಲ್ಲಿಯವರೆಗೆ 165960 ಲಕ್ಷ ಸ್ವ-ಸಹಾಯ ಗುಂಪುಗಳು ಅನುಷ್ಠಾನದಲ್ಲಿದ್ದು, 25.85 ಲಕ್ಷ ಮಹಿಳಾ ಸದಸ್ಯರನ್ನು ಒಗ್ಗೂಡಿಸಲಾಗಿದೆ.

- **ಯೋಜನೆಯ ಧ್ಯೇಯೋದ್ದೇಶ:-**

1. ಮಹಿಳೆಯರಿಗೆ ಆರ್ಥಿಕ ಪ್ರಗತಿಯನ್ನು ಸಾಧಿಸುವಂತಹ ಹಾಗೂ ಸಾಮಾಜಿಕ ಬದಲಾವಣೆಗೆ ಸೂಕ್ತ ವಾತಾವರಣವನ್ನು ಮೂಡಿಸುವಂತಹ ಪ್ರಕ್ರಿಯೆಯನ್ನು ಬಲಪಡಿಸುವುದು.
2. ಮಹಿಳೆಯರಲ್ಲಿ ಆತ್ಮವಿಶ್ವಾಸ ಮತ್ತು ಸ್ವಾವಲಂಬನೆ ಮೂಡಿಸಿ ಸಂಪನ್ಮೂಲಗಳ ಮೇಲೆ ಹತೋಟಿ ಹಾಗೂ ಸಾಮಿಪ್ಯವನ್ನು ಸಾಧಿಸುವುದು.
3. ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ಮಹಿಳೆಯರನ್ನು ತೊಡಗಿಸುವುದರ ಮೂಲಕ ಬಡಮಹಿಳೆಯರ ಆದಾಯವನ್ನು ಹೆಚ್ಚಿಸಿ, ಅವರಲ್ಲಿ ಆರ್ಥಿಕ ಸ್ಥಿರತೆಯನ್ನು ಮೂಡಿಸುವುದು ತನ್ಮೂಲಕ ಬಡತನ ನಿವಾರಣೆ ಮಾಡುವುದು.
4. ವಿವಿಧ ಇಲಾಖೆಗಳನ್ನು ಒಮ್ಮುಖಗೊಳಿಸುವುದರ ಮೂಲಕ ಮಹಿಳಾ ಗುಂಪಿನ ಸದಸ್ಯರುಗಳಿಗೆ ವಿವಿಧ ಇಲಾಖೆಗಳ ಅಭಿವೃದ್ಧಿ ಕಾರ್ಯಕ್ರಮಗಳ ಫಲ ದೊರೆಯುವಂತೆ ಅವಕಾಶ ಕಲ್ಪಿಸುವುದು ಹಾಗೂ ಸಾಲ ನೀಡುವಂತಹ ಸಂಸ್ಥೆಗಳಿಗೆ ಸಾಮೀಪ್ಯ ಒದಗಿಸುವುದರ ಜೊತೆಗೆ ಸಾಲ ದೊರೆಯುವಂತೆ ಕ್ರಮ ಕೈಗೊಳ್ಳುವುದು.

- **ಗುಂಪಿನ ಉಳಿತಾಯ ಹಾಗೂ ಆಂತರಿಕ ಸಾಲ:** ಸ್ತ್ರೀಶಕ್ತಿ ಗುಂಪುಗಳು ಉಳಿತಾಯ ಮಾಡಿರುವ ರೂ. 3438.85 ಕೋಟಿಗಳ ಉಳಿತಾಯದ ಮೊತ್ತವನ್ನು ಸದಸ್ಯರು ವೈಯುಕ್ತಿಕ ಸಾಲ ಹಾಗೂ ಆದಾಯೋತ್ಪನ್ನ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಬಳಸುತ್ತಿದ್ದು ಸದಸ್ಯರು ಪಡೆದ ಸಾಲವನ್ನು ಸಕಾಲಕ್ಕೆ ಮರುಪಾವತಿ

ಮಾಡುತ್ತಿರುವ ಬಗ್ಗೆ ಅಂಗನವಾಡಿ ಕಾರ್ಯಕರ್ತೆಯರು, ಮೇಲ್ವಿಚಾರಕಿಯರು, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಉಸ್ತುವಾರಿ ಹಾಗೂ ಮೇಲ್ವಿಚಾರಣೆ ಮಾಡುತ್ತಿದ್ದಾರೆ. ಇದರಿಂದಾಗಿ ಹೆಚ್ಚಿನ ಬಡ್ಡಿ ದರದಲ್ಲಿ ಹೊರಗಡೆಯಿಂದ ಸಾಲ ಪಡೆಯುವುದನ್ನು ತಪ್ಪಿಸಲಾಗಿದೆ.

- **ಸುತ್ತುನಿಧಿ:** ಕನಿಷ್ಠ 6 ತಿಂಗಳ ಉಳಿತಾಯ ಮಾಡಿರುವ ಪ್ರತಿ ಸ್ತ್ರೀಶಕ್ತಿ ಗುಂಪುಗಳಿಗೆ ರೂ.5000/- ಸುತ್ತುನಿಧಿ ನೀಡಲಾಗುತ್ತಿದೆ.

- **ಹೆಚ್ಚುವರಿ ಸುತ್ತುನಿಧಿ:** ರೂ.25000/- ಸುತ್ತು ನಿಧಿಯನ್ನು ಹಂತ ಹಂತವಾಗಿ ನೀಡಲಾಗುತ್ತಿದೆ.

- **ಬ್ಯಾಂಕ್ ಲಿಂಕೇಜ್:** ಸ್ತ್ರೀಶಕ್ತಿ ಗುಂಪುಗಳಿಗೆ ಕಡ್ಡಾಯವಾಗಿ ಬ್ಯಾಂಕ್ ಗಳಲ್ಲಿ ಖಾತೆ ತೆರೆಯಲು ಉಳಿತಾಯ ಮಾಡಲು ಮತ್ತು ಬ್ಯಾಂಕ್ ಸಾಲ ಪಡೆಯಲು ಅವಕಾಶ ಕಲ್ಪಿಸುವುದು. ಇದುವರೆಗೂ ಒಟ್ಟು 147009 ಗುಂಪುಗಳು ಬ್ಯಾಂಕಿನಿಂದ ರೂ. 10049.53 ಕೋಟಿಗಳನ್ನು ಆರ್ಥಿಕ ಸಹಾಯ ಪಡೆದು ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿಕೊಂಡಿರುತ್ತಾರೆ.

- **ಕಿಟ್ ಸಾಮಗ್ರಿ:-** ಪ್ರತಿ ಗುಂಪಿಗೆ ರೂ.600/- ರಂತೆ ಅವಶ್ಯವಿರುವ 9 ಪುಸ್ತಕ ಹಾಗೂ ಟ್ರಂಕ್‌ಗಳನ್ನೊಳಗೊಂಡ ಕಿಟ್‌ನ್ನು ಎಲ್ಲಾ 1.65 ಲಕ್ಷ ಗುಂಪುಗಳಿಗೂ ವಿತರಿಸಲಾಗಿದೆ.

- **ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿರುವ ಗುಂಪುಗಳಿಗೆ ಪ್ರೋತ್ಸಾಹ ಧನ:-** ಸ್ತ್ರೀಶಕ್ತಿ ಗುಂಪುಗಳು ವಿವಿಧ ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿ ಆರ್ಥಿಕವಾಗಿ ಸಬಲರಾಗುತ್ತಿದ್ದಾರೆ. ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ಕೃಷಿ ಆಧಾರಿತ ಚಟುವಟಿಕೆಗಳಾದ ಮಲ್ಲಿಗೆ ಹೂ, ನರ್ಸರಿ, ತರಕಾರಿ, ಇತರೆ ವ್ಯಾಪಾರಿ ಹೂಗಳ, ಹಣ್ಣು, ಅಣಬೆ ಬೆಳೆಯುವುದು, ಎರೆಹುಳು ಗೊಬ್ಬರ ತಯಾರಿಕೆ, ಇತ್ಯಾದಿ ಮತ್ತು ಕೃಷಿಯೇತರ ಚಟುವಟಿಕೆಗಳಲ್ಲಿ ಸಿದ್ಧ ಉಡುಪು, ಉಪ್ಪಿನ ಕಾಯಿ, ಹಪ್ಪಳ, ಸಾಂಬಾರುಪುಡಿ ತಯಾರಿಕೆ, ಕಂಬಳಿ ನೇಯ್ಗೆ, ಬ್ಯೂಟಿಪಾರ್ಲರ್, ಎಲೆಕ್ಟ್ರಾನಿಕ್ ವಸ್ತುಗಳ ರಿಪೇರಿ, ಎಂಬ್ರಾಯಿಡರಿ, ಫ್ಯಾಷನ್ ಡಿಸೈನಿಂಗ್, ಸಣ್ಣ ವ್ಯಾಪಾರ ಇತ್ಯಾದಿ ಚಟುವಟಿಕೆಗಳಲ್ಲಿ ತೊಡಗಿರುತ್ತಾರೆ.

  ಗುಂಪಿನ ಸದಸ್ಯರು ಉತ್ಪಾದಿಸುವ ವಸ್ತುಗಳಿಗೆ ಸೂಕ್ತ ಮಾರುಕಟ್ಟೆ ಕಲ್ಪಿಸಲು ಇಲಾಖೆಯ ಮೂಲಕ ಬ್ರಾಂಡ್ ಕೂಡ ಬಿಡುಗಡೆ ಮಾಡಲಾಗಿದೆ. ಆದಾಯೋತ್ಪನ್ನ ಚಟುವಟಿಕೆಯಲ್ಲಿ ತೊಡಗಿರುವ ಸ್ತ್ರೀಶಕ್ತಿ ಗುಂಪುಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಗುಂಪುಗಳಿಗೆ ತಲಾ ರೂ. 5000/- ದಂತೆ ಪ್ರೋತ್ಸಾಹಧನ ನೀಡಲಾಗುತ್ತಿದೆ.

- **ಅಧಿಕ ಉಳಿತಾಯ ಮಾಡಿರುವ ಗುಂಪುಗಳಿಗೆ ಪ್ರೋತ್ಸಾಹಧನ:** ಗುಂಪುಗಳಲ್ಲಿ ಉಳಿತಾಯ ಮನೋಭಾವನೆಯನ್ನು ಪ್ರೋತ್ಸಾಹಿಸಲು, ರೂ.75,000 ದಿಂದ ರೂ. 1.00 ಲಕ್ಷದವರೆಗೆ ಉಳಿತಾಯ ಮಾಡಿರುವ ಗುಂಪುಗಳಿಗೆ ತಲಾ ರೂ.15,000/- ಗಳ ಹಾಗೂ ರೂ. 1.00 ಲಕ್ಷಕ್ಕೂ ಹೆಚ್ಚು ಉಳಿತಾಯ ಮಾಡಿರುವ ಗುಂಪುಗಳಿಗೆ ತಲಾ ರೂ.20,000/- ಗಳ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.

- **ಸಾಲದ ಮೇಲಿನ ಬಡ್ಡಿಗೆ ಶೇಕಡ 6ರ ಸಹಾಯ ಧನ:** ರೂ.25,000/-ದಿಂದ 1.00 ಲಕ್ಷದವರೆಗೆ ಸಾಲವನ್ನು ಪಡೆಯುವ ಸ್ತ್ರೀಶಕ್ತಿ ಗುಂಪುಗಳಿಗೆ, ಸಾಲದ ಮೇಲಿನ ಬಡ್ಡಿ ದರಕ್ಕೆ ಶೇಕಡ 6 ರ ಸಹಾಯಧನವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.

- **ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ:** ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳಗಳನ್ನು ಏರ್ಪಡಿಸಲು ಪ್ರತಿ ಜಿಲ್ಲೆಗೆ ಪ್ರತಿ ವರ್ಷ ರೂ.75,000/- ಗಳನ್ನು ಬಿಡುಗಡೆಗೊಳಿಸಲಾಗುತ್ತಿದೆ. ಮಹಿಳಾ ದಿನಾಚರಣೆ ಸಂದರ್ಭದಲ್ಲಿ ರಾಜ್ಯ ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳದಲ್ಲಿ ಮತ್ತು ಕೃಷಿ ಮೇಳಗಳಲ್ಲಿಯೂ ಸ್ತ್ರೀಶಕ್ತಿ ಗುಂಪುಗಳು ಉತ್ಪಾದಿಸುವ ವಸ್ತುಗಳನ್ನು ಮಾರಾಟ ಮಾಡಲು ಅವಕಾಶ ಕಲ್ಪಿಸಲಾಗುತ್ತಿದೆ.

- **ಸ್ತ್ರೀಶಕ್ತಿ ಸಮಾವೇಶ:** ಪ್ರತಿ ವರ್ಷ ಸ್ತ್ರೀಶಕ್ತಿ ಗುಂಪುಗಳಿಗೆ ಇಲಾಖಾ ಕಾರ್ಯಕ್ರಮಗಳ ಕುರಿತು, ಅರಿವು ಮೂಡಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದಲ್ಲಿ ಸ್ತ್ರೀಶಕ್ತಿ ಸಮಾವೇಶಗಳನ್ನು ಏರ್ಪಡಿಸಲಾಗುತ್ತಿದೆ.

- **ತಾಲ್ಲೂಕು ಮಟ್ಟದ ಬ್ಲಾಕ್ ಸೊಸೈಟಿ ಫೆಡರೇಷನ್:** 2006-07ನೇ ಸಾಲಿನಲ್ಲಿ 174 ತಾಲ್ಲೂಕುಗಳಲ್ಲಿ ತಾಲ್ಲೂಕು ಮಟ್ಟದ ಬ್ಲಾಕ್ ಸೊಸೈಟಿ ಫೆಡರೇಷನ್‌ಗಳನ್ನು ರಚಿಸಿ, ಸಹಕಾರ ಇಲಾಖೆಯ ಸೊಸೈಟಿ ಕಾಯ್ದೆ 1960 ರಡಿ ನೊಂದಾಯಿಸಲಾಗಿದ್ದು, ಈ ಒಕ್ಕೂಟಗಳಲ್ಲಿ 1747 ಪಧಾದಿಕಾರಿಗಳು ಆಯ್ಕೆಯಾಗಿರುತ್ತಾರೆ. ಪ್ರತಿ ವರ್ಷ ಫೆಡರೇಷನ್‌ಗೆ ರೂ.30,000/-ಗಳಂತೆ ಅವುಗಳ ಬಲವರ್ಧನೆಗಾಗಿ ತಲಾ ರೂ. ಒಟ್ಟು ರೂ.30,000/- ಬಿಡುಗಡೆ ಮಾಡಲಾಗಿದೆ. ಒಕ್ಕೂಟದ ಪ್ರತಿನಿಧಿಗಳಿಗೆ ರಾಜ್ಯ ಮಟ್ಟದಲ್ಲಿ ಬಲವರ್ಧನೆಗಾಗಿ ಬಿಡುಗಡೆಗೊಳಿಸಿರುವ ಅನುದ್ಧಾನದ ಉಪಯೋಗದ ಕುರಿತು 1 ದಿನದ ತರಬೇತಿಯನ್ನು ನೀಡಲಾಗಿದೆ.

- **ಸ್ತ್ರೀಶಕ್ತಿ ಸಮೃದ್ಧಿ ಯೋಜನೆ:** ಜಿಲ್ಲಾ ಮಟ್ಟದ ಒಕ್ಕೂಟಗಳನ್ನು ರಚಿಸಿ ಇದರ ಮೂಲಕ ತಾಲ್ಲೂಕು ಮಟ್ಟದ ಸ್ತ್ರೀಶಕ್ತಿ ಒಕ್ಕೂಟ ಹಾಗೂ ಗೊಂಚಲು ಗುಂಪುಗಳನ್ನು ಬಲವರ್ಧನೆಗೊಳಿಸಲು ಹಾಗೂ ಉತ್ತಮ ನಿರ್ವಹಣೆಗಾಗಿ ಗುಂಪುಗಳ ನಡುವೆ ಸಹಕಾರ ಹಾಗೂ ಸಮನ್ವಯತೆಯನ್ನು ಕಾಯ್ದುಕೊಳ್ಳಲು ಜಿಲ್ಲಾ ಮಟ್ಟದ ಒಕ್ಕೂಟಗಳನ್ನು 2016-17ನೇ ಸಾಲಿನಲ್ಲಿ ರಚಿಸಲಾಗಿದೆ. ಈ ಒಕ್ಕೂಟಗಳಲ್ಲಿ 297 ಪದಾಧಿಕಾರಿಗಳು ಆಯ್ಕೆಯಾಗಿರುತ್ತಾರೆ.

- **ಅತ್ಯುತ್ತಮ ಸ್ತ್ರೀಶಕ್ತಿ ಗುಂಪುಗಳ ಪ್ರಶಸ್ತಿ:** ಪ್ರತಿ ವರ್ಷ ಮಾರ್ಚ್ 8 ರಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ರಾಜ್ಯದಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಸ್ತ್ರೀಶಕ್ತಿ ಗುಂಪುಗಳನ್ನು ಪ್ರೋತ್ಸಾಹಿಸಲು ಗುಂಪುಗಳನ್ನು ಗುರುತಿಸಿ, ತಾಲ್ಲೂಕು ಮಟ್ಟದಲ್ಲಿ ತಲಾ ರೂ.2000/-, ಜಿಲ್ಲಾ ಮಟ್ಟದಲ್ಲಿ ರೂ.5000/-, ಮತ್ತು ರಾಜ್ಯ ಮಟ್ಟದಲ್ಲಿ ಮೊದಲನೇ ಅತ್ಯುತ್ತಮ ಗುಂಪಿಗೆ ರೂ.50,000/-, ಎರಡನೇ ಅತ್ಯುತ್ತಮ ಗುಂಪಿಗೆ ರೂ.30,000/- ಮತ್ತು ಮೂರನೇ ಅತ್ಯುತ್ತಮ ಗುಂಪಿಗೆ ರೂ.20,000/- ನಗದು ಬಹುಮಾನದೊಂದಿಗೆ ಪ್ರಶಸ್ತಿ ಪತ್ರಗಳನ್ನು ನೀಡಿ ಗೌರವಿಸಲಾಗುತ್ತಿದೆ.

- ಶ್ರೀಮತಿ. ಯಶೋಧರಮ್ಮ ದಾಸಪ್ಪ ಇವರ ಹೆಸರಿನಲ್ಲಿ ನಾಲ್ಕು ಅತ್ಯುತ್ತಮ ಸ್ತ್ರೀಶಕ್ತಿ ಗುಂಪುಗಳನ್ನು ನಾಲ್ಕು ಕಂದಾಯ ವಿಭಾಗಗಳಿಂದ ಗುರುತಿಸಿ ತಲಾ ರೂ.25,000/- ಹಾಗೂ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುತ್ತಿದೆ.

- **ತಾಲ್ಲೂಕು ಒಕ್ಕೂಟಗಳಿಗೆ ಪ್ರಶಸ್ತಿ:** 2010-11ನೇ ಸಾಲಿನಿಂದ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ತಾಲ್ಲೂಕು ಒಕ್ಕೂಟಗಳಿಗೆ ರಾಜ್ಯ ಮಟ್ಟದಲ್ಲಿ 3 ಪ್ರಶಸ್ತಿಗಳನ್ನು ನೀಡುವ ಯೋಜನೆಯನ್ನು ಜಾರಿಗೊಳಿಸುತ್ತಿದ್ದು, ಅದರಂತೆ, ಮೊದಲನೇ ಅತ್ಯುತ್ತಮ ಒಕ್ಕೂಟಕ್ಕೆ ರೂ.80,000/-, ಎರಡನೇ ಅತ್ಯುತ್ತಮ ಒಕ್ಕೂಟಕ್ಕೆ ರೂ.70,000/-, ಮೂರನೇ ಅತ್ಯುತ್ತಮ ಒಕ್ಕೂಟಕ್ಕೆ ರೂ.60,000/- ನಗದು ಬಹುಮಾನದೊಂದಿಗೆ ಪ್ರಶಸ್ತಿ ಪತ್ರಗಳನ್ನು ನೀಡಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ದಿನದಂದು ವಿತರಿಸಲಾಗುತ್ತದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲೆಗೊಂದು ಅತ್ಯುತ್ತಮ ತಾಲ್ಲೂಕು ಒಕ್ಕೂಟಕ್ಕೆ ರೂ.10,000/- ನಗದು ಬಹುಮಾನದೊಂದಿಗೆ ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಗುತ್ತಿದೆ.

- **ತರಬೇತಿ:** ಸ್ತ್ರೀಶಕ್ತಿ ಯೋಜನೆಯ ಅನುಷ್ಠಾನದ ಬಗ್ಗೆ ಕ್ಷೇತ್ರ ಮಟ್ಟದಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಸಿಬ್ಬಂದಿ,ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಗುಂಪಿನ ಸದಸ್ಯರಿಗೆ ಒರಿಯಂಟೇಶನ್, ಲಿಂಗತ್ವ, ನಾಯಕತ್ವ, ಸಂವಹನ, ಲೆಕ್ಕ ಪತ್ರ ನಿರ್ವಹಣೆ, ಸಾಲ ನಿರ್ವಹಣೆ ಮತ್ತು ಸಾಮಾಜಿಕ ವಿಷಯಗಳ ಬಗ್ಗೆ ವಿವಿಧ ಹಂತಗಳಲ್ಲಿ ತರಬೇತಿ ನೀಡಲಾಗುತ್ತಿದೆ. ಆದಾಯೋತ್ಪನ್ನ ಚಟುವಟಿಕೆಯನ್ನು ಹಮ್ಮಿಕೊಂಡು ಉತ್ತಮ ಗುಣಮಟ್ಟದ ವಸ್ತುಗಳನ್ನು ಉತ್ಪಾದಿಸಲು ಅನುವಾಗುವಂತೆ ಕೌಶಲ್ಯ ಅಭಿವೃದ್ಧಿ ತರಬೇತಿಯನ್ನು ನೀಡಲಾಗುತ್ತಿದೆ.

- **ಗೊಂಚಲು/ಬ್ಲಾಕ್ ಸೊಸೈಟಿ ಬಲವರ್ಧನೆಗಾಗಿ ತರಬೇತಿ:** ಸ್ತ್ರೀಶಕ್ತಿ ಗೊಂಚಲು/ ಒಕ್ಕೂಟಗಳ ಬಲವರ್ಧನೆಗಾಗಿ ಸ್ತ್ರೀಶಕ್ತಿ ಗುಂಪಿನ ಸದಸ್ಯರು ಹಾಗೂ ಕ್ಷೇತ್ರಮಟ್ಟದ ಇಲಾಖಾ ಸಿಬ್ಬಂದಿಯವರಿಗೆ ಲಿಂಗತಾರತಮ್ಯ, ನಾಯಕತ್ವ, ಪುನಶ್ಚೇತನ, ಸಂವಹನ, ಪುಸ್ತಕ ನಿರ್ವಹಣೆ, ಸಾಲ ನಿರ್ವಹಣೆ ಹಾಗೂ ಸಾಮಾಜಿಕ ವಿಷಯಗಳ ಕುರಿತು 4 ಹಂತಗಳಲ್ಲಿ ತರಬೇತಿ ನೀಡಲಾಗಿದೆ. ನಬಾರ್ಡ್ ಸಂಸ್ಥೆಯ ಸಹಯೋಗದೊಂದಿಗೆ ಒಕ್ಕೂಟದ 1573 ಕಾರ್ಯಕಾರಿ ಸಮಿತಿ ಸದಸ್ಯರಿಗೆ ತರಬೇತಿ ನೀಡಲಾಗಿದೆ.

- **ಕೌಶಲ್ಯ/ಉದ್ಯಮಶೀಲತೆ ತರಬೇತಿಗಳು:** ಸ್ತ್ರೀಶಕ್ತಿ ಯೋಜನೆಯಡಿ ಆಯ್ದ ಮತ್ತು ಆಸಕ್ತ ಸ್ತ್ರೀಶಕ್ತಿ ಗುಂಪುಗಳಿಗೆ, ಜಿಲ್ಲಾ ಮತ್ತು ತಾಲ್ಲೂಕು ಒಕ್ಕೂಟದ ಪದಾಧಿಕಾರಿಗಳಿಗೆ ಕಾಲಕಾಲಕ್ಕೆ ತರಬೇತಿಗಳನ್ನು ಅನುದಾನ ಲಭ್ಯತೆಗನುಗುಣವಾಗಿ ಹಮ್ಮಿಕೊಳ್ಳಲಾಗುತ್ತಿದೆ. (ಕಂಪ್ಯೂಟರ್, ಸಾಮರ್ಥ್ಯಾಭಿವೃದ್ಧಿ, ವ್ಯಕ್ತಿತ್ವ ವಿಕಸನ ಅಭಿವೃದ್ಧಿ, ಕೌಶಲ್ಯಾಧಾರಿತ ಮತ್ತು ಉದ್ಯಮಶೀಲತ ತರಬೇತಿ).

- **ಜಿಲ್ಲಾ ಮಾರುಕಟ್ಟೆ ಸಂಕೀರ್ಣ:** ಸ್ತ್ರೀಶಕ್ತಿ ಗುಂಪುಗಳು ತಾವು ತಯಾರಿಸಿದ ವಸ್ತುಗಳಿಗೆ ಮಾರುಕಟ್ಟೆ ಸೌಲಭ್ಯವಿಲ್ಲದ ತಯಾರಿಸಿದ ಉತ್ಪನ್ನಗಳನ್ನು ಮಾರಾಟ ಮಾಡಲು ಹಾಗೂ ದೊಡ್ಡ ಉದ್ಯಮಿಗಳೊಂದಿಗೆ ಸ್ಪಂದಿಸಲು ಸಾಧ್ಯವಾಗದೇ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಈ ನಿಟ್ಟಿನಲ್ಲಿ ಇಲಾಖೆಯು ಗುಂಪುಗಳ ಕೈ ಬಲಪಡಿಸಲು ಸ್ತ್ರೀಶಕ್ತಿ ಭವನ/ ಮಾರುಕಟ್ಟೆ ಮಳಿಗೆಗಳನ್ನು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಿರ್ಮಿಸಲು

ಆರ್ಥಿಕ ಸಹಾಯ ನೀಡುವ ಯೋಜನೆಯನ್ನು ಜಾರಿಗೆ ತರಲಾಗಿದ್ದು, 2006-07 ನೇ ಸಾಲಿನಲ್ಲಿ ಜಿಲ್ಲಾ ಮಾರುಕಟ್ಟೆ ಮಳಿಗೆಗಳನ್ನು ನಿರ್ಮಿಸಲು ಪ್ರಾರಂಭಿಸಿದ್ದು, ಇದುವರೆಗೆ 29 ಜಿಲ್ಲೆಗಳಲ್ಲಿ ಜಿಲ್ಲಾ ಮಾರುಕಟ್ಟೆ ಮಳಿಗೆಗಳನ್ನು ನಿರ್ಮಿಸಲಾಗಿದೆ.

- **ತಾಲ್ಲೂಕು ಮಾರುಕಟ್ಟೆ ಭವನ/ಮಳಿಗೆಗಳ ನಿರ್ಮಾಣ:-** ಹೆಚ್ಚಿನ ಪ್ರಮಾಣದಲ್ಲಿ ಗುಂಪುಗಳು ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಸಲುವಾಗಿ ತದನಂತರ ಹಂತ ಹಂತವಾಗಿ ತಾಲ್ಲೂಕು ಮಟ್ಟದಲ್ಲಿ ಮಾರುಕಟ್ಟೆ ಸೌಲಭ್ಯಗಳನ್ನು ಒದಗಿಸುವ ಸಲುವಾಗಿ 2006-07 ರಿಂದ 2017-18 ರವರೆಗೆ 166 ತಾಲ್ಲೂಕು ಮಾರಾಟ ಮಳಿಗೆಗಳನ್ನು ನಿರ್ಮಿಸಲು ರೂ 2900.99 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

- **ವಿಭಾಗೀಯ ಮಟ್ಟದ ತರಬೇತಿ ಕೇಂದ್ರ ನಿರ್ಮಾಣ:-** 2010-11 ರಿಂದ 2012-13 ನೇ ಸಾಲಿನಲ್ಲಿ ಬೆಂಗಳೂರು, ಕಲಬುರ್ಗಿ, ಗದಗ ಮತ್ತು ಮೈಸೂರು ಇಲ್ಲಿ ವಿಭಾಗೀಯ ಮಟ್ಟದ 4 ತರಬೇತಿ ಕೇಂದ್ರಗಳನ್ನು ನಿರ್ಮಿಸಲಾಗಿದೆ. 2018-19 ಸಾಲಿನವರೆಗೆ ಒಟ್ಟು ರೂ. 1013.89 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ.

- **ಸ್ತ್ರೀಶಕ್ತಿ ಯೋಜನೆಯಡಿ ಹೊಸ ಕಾರ್ಯಕ್ರಮಗಳು:** 2021-22 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಕಂಡಿಕೆ 29 ರಲ್ಲಿ "ಮಹಿಳಾ ಸ್ವ-ಸಹಾಯ ಸಂಘಗಳು ಹಾಗೂ ಮಹಿಳಾ ಉದ್ಯಮಿಗಳು ತಯಾರಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸಲು ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ನಗರಗಳಲ್ಲಿ ಒಂದು ವಾರದ ಅವಧಿಗೆ ಮಾರಾಟ ಮೇಳ ಹಮ್ಮಿಕೊಳ್ಳಾಗುವುದು ಎಂದು ಘೋಷಣೆ ಮಾಡಲಾಗಿರುತ್ತದೆ." ಸದರಿ ಕಾರ್ಯಕ್ರಮಕ್ಕೆ ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ಪಡೆದು 2021-22 ನೇ ಸಾಲಿನಿಂದ ಪ್ರತಿ ವಿಭಾಗಕ್ಕೆ ರೂ15.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಮಾರ್ಗಸೂಚಿಗಳನ್ನು ಸಹ ಹೊರಡಿಸಲಾಗಿದೆ.

- **ಅಮೃತ ಸ್ವ-ಸಹಾಯ ಕಿರು ಉದ್ದಿಮೆ ಯೋಜನೆ:** 2021-22ನೇ ಸಾಲಿನಲ್ಲಿ ಭಾರತ ಸ್ವಾತಂತ್ರ್ಯದ 75ನೇ ವರ್ಷದ ಅಮೃತ ಮಹೋತ್ಸವದ ಸವಿನೆನಪಿಗಾಗಿ ಮಾನ್ಯ ಮುಖ್ಯಮಂತ್ರಿಗಳು ಅಮೃತ ಸ್ವ-ಸಹಾಯ ಕಿರು ಉದ್ದಿಮೆ ಯೋಜನೆಯನ್ನು ಘೋಷಿಸಿರುತ್ತಾರೆ. ಯೋಜನೆಯಡಿ 7500 ಸ್ವ-ಸಹಾಯ ಗುಂಪುಗಳನ್ನು ಕಿರು ಉದ್ದಿಮೆಗಳನ್ನಾಗಿ ಪರಿವರ್ತಿಸಲು ಜಿಲ್ಲಾವಾರು ಗುರಿ ನಿಗದಿಪಡಿಸಿ ಪ್ರತಿ ಗುಂಪಿಗೆ ತಲಾ ರೂ.1.00 ಲಕ್ಷದಂತೆ ಬೀಜಧನ ಒದಗಿಸಲು ರೂ.75.00 ಕೋಟಿಗಳ ಅನುದಾನ ಬಿಡುಗಡೆಗೊಳಿಸಲಾಗಿದೆ. 7500 ಸ್ವ-ಸಹಾಯ ಗುಂಪುಗಳನ್ನು ಸಮಿತಿಗಳ ಮೂಲಕ ಆಯ್ಕೆ ಮಾಡಿ, ಜಿಲ್ಲಾವಾರು ಗುರಿಯಂತೆ ಅನುದಾನ ಬಿಡುಗಡೆಗೊಳಿಸಿದ್ದು, ಇದುವರೆಗೂ 7117 ಗುಂಪುಗಳಿಗೆ ಚೆಕ್ ವಿತರಿಸಿದ್ದು, ಉಳಿದ 383 ಗುಂಪುಗಳಿಗೆ ಚೆಕ್ ವಿತರಣಾ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಯೋಜನೆಯಡಿ ಆಯ್ಕೆಯಾದ ಗುಂಪುಗಳಿಗೆ ರೂ.150.00 ಲಕ್ಷಗಳ ಅನುದಾನದಲ್ಲಿ ಉದ್ಯಮಶೀಲತಾ ಮತ್ತು ಕೌಶಲ್ಯಾಭಿವೃದ್ಧಿ ತರಬೇತಿ ಒದಗಿಸಲು ಕ್ರಮವಹಿಸಲಾಗಿದೆ

# ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ

1. **ಉದ್ಯೋಗಿನಿ ಯೋಜನೆ :-**

ಮಹಿಳೆಯರು ಆದಾಯ ಉತ್ಪನ್ನಕರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಸ್ವಯಂ ಉದ್ಯೋಗಿಗಳಾಗಲು ಬ್ಯಾಂಕ್ ಮೂಲಕ ಸಾಲ ಮತ್ತು ನಿಗಮದ ಮೂಲಕ ಸಹಾಯಧನವನ್ನು ನೀಡಲಾಗುತ್ತದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಸಾಲದ ಘಟಕ ವೆಚ್ಚ ಕನಿಷ್ಠ ರೂ.1.00 ಲಕ್ಷದಿಂದ ಗರಿಷ್ಠ ರೂ.3.00 ಲಕ್ಷಗಳು, ಸಹಾಯಧನದ ಮೊತ್ತ 50 ರಷ್ಟು, ಗರಿಷ್ಠ ರೂ.1,50,000/-. ಕುಟುಂಬದ ವಾರ್ಷಿಕ ಆದಾಯದ ಗರಿಷ್ಠ ಮಿತಿ ರೂ.2.00 ಲಕ್ಷಗಳು.

ಸಾಮಾನ್ಯ ವರ್ಗ ಮತ್ತು ವಿಶೇಷ ವರ್ಗದ ಫಲಾನುಭವಿಗಳಿಗೆ ಸಾಲದ ಘಟಕ ವೆಚ್ಚ ರೂ.1.00ಲಕ್ಷ ರೂ ಗಳಿಂದ ರೂ. 3.00 ಲಕ್ಷಗಳು, ಸಹಾಯಧನದ ಮೊತ್ತ ಶೇ.30 ರಷ್ಟು ಗರಿಷ್ಠ ರೂ.90,000/-. ಕುಟುಂಬದ ವಾರ್ಷಿಕ ಆದಾಯದ ಗರಿಷ್ಠ ಮಿತಿ ರೂ.1.50 ಲಕ್ಷಗಳು. ಎಲ್ಲಾ ವರ್ಗದ ಮಹಿಳೆಯರಿಗೆ ವಯೋಮಿತಿ 18 ರಿಂದ 55 ವರ್ಷಗಳು.

2. **ಕಿರುಸಾಲ ಯೋಜನೆ:-**

ಈ ಯೋಜನೆಯಡಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಸ್ತ್ರೀಶಕ್ತಿ ಯೋಜನೆಯಡಿ ರಚನೆಗೊಂಡ ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘಗಳು ಆರ್ಥಿಕವಾಗಿ ಸಬಲರಾಗಲು ಪ್ರತಿ ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘಕ್ಕೆ ನಿಗಮದ ವತಿಯಿಂದ ಬಡ್ಡಿ ರಹಿತ ಸಾಲ ಒದಗಿಸುವುದು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸ್ತ್ರೀ ಶಕ್ತಿ ಸಂಘಕ್ಕೆ ರೂ.1.00 ಲಕ್ಷದಿಂದ ರೂ. 3.00 ಲಕ್ಷಗಳವರೆಗೆ ಮತ್ತು ಇತರೆ ವರ್ಗದ ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘಗಳಿಗೆ ರೂ.1.00 ಲಕ್ಷದಿಂದ ರೂ. 2.00 ಲಕ್ಷಗಳವರೆಗೆ ಉಳಿತಾಯದ ಮೊತ್ತಕ್ಕನುಸಾರವಾಗಿ ಬಡ್ಡಿ ರಹಿತ ಸಾಲ ಒದಗಿಸಲಾಗುತ್ತದೆ.

3. **ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ:-**

ಲಿಂಗತ್ವ ಅಲ್ಪಸಂಖ್ಯಾತರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸಲು ಆದಾಯೋತ್ಪನ್ನಕರ ಚಟುವಟಿಕೆ ಕೈಗೊಳ್ಳುವ ಉದ್ದೇಶಕ್ಕಾಗಿ ನಿಗಮದಿಂದ ನೇರವಾಗಿ ಪ್ರೋತ್ಸಾಹ ಧನ ಮೊತ್ತ ರೂ.30,000/-ಗಳ ಆರ್ಥಿಕ ಸೌಲಭ್ಯವನ್ನು ಉದ್ಯಮ ಶೀಲತಾ ಅಭಿವೃದ್ಧಿ ತರಬೇತಿಯೊಂದಿಗೆ ನೀಡಲಾಗುತ್ತದೆ.

4. **ಚೇತನ ಯೋಜನೆ:-**

ದಮನಿತ ಮಹಿಳೆಯರು ಆದಾಯೋತ್ಪನ್ನ ಚಟುವಟಿಕೆ ಕೈಗೊಳ್ಳಲು ಅನುವಾಗುವಂತೆ ನಿಗಮದಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ದಮನಿತ ಮಹಿಳೆಯರಿಗೆ ನಿಗಮದಿಂದ ನೇರವಾಗಿ ಪ್ರೋತ್ಸಾಹಧನ ಮೊತ್ತ ರೂ.30,000/-ಗಳನ್ನು ಉದ್ಯಮಶೀಲತಾ ಅಭಿವೃದ್ಧಿ ತರಬೇತಿಯೊಂದಿಗೆ ನೀಡಲಾಗುತ್ತದೆ.

5. **ಧನಶ್ರೀ ಯೋಜನೆ:-**

18 ರಿಂದ 60 ವಯೋಮಾನದ ಹೆಚ್.ಐ.ವಿ ಸೋಂಕಿತ ಮಹಿಳೆಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ನಿಗಮದಿಂದ ನೇರವಾಗಿ ಪ್ರೋತ್ಸಾಹ ಧನ ಮೊತ್ತ ರೂ.30,000/-ಗಳ ಆರ್ಥಿಕ ಸೌಲಭ್ಯವನ್ನು ಉದ್ಯಮಶೀಲತಾ ಅಭಿವೃದ್ಧಿ ತರಬೇತಿಯೊಂದಿಗೆ ಒದಗಿಸಲಾಗುತ್ತಿದೆ.

6. **ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆ :-**

ಆರ್ಥಿಕವಾಗಿ ಮಾಜಿ ದೇವದಾಸಿಯರನ್ನು ಸಬಲೀಕರಣಗೊಳಿಸಲು ಆದಾಯೋತ್ಪನ್ನಕರ ಚಟುವಟಿಕೆ ಕೈಗೊಳ್ಳುವ ಉದ್ದೇಶಕ್ಕಾಗಿ ನಿಗಮದಿಂದ ನೇರವಾಗಿ ಪ್ರೋತ್ಸಾಹ ಧನ ಮೊತ್ತ ರೂ.30,000/-ಗಳ ಆರ್ಥಿಕ ಸೌಲಭ್ಯವನ್ನು ಇ.ಡಿ.ಪಿ ತರಬೇತಿಯೊಂದಿಗೆ ನೀಡಲಾಗುತ್ತಿದೆ ಹಾಗೂ ದೇವದಾಸಿ ಪದ್ಧತಿಯ

ನಿರ್ಮೂಲನೆಗಾಗಿ ಅರಿವು ಮೂಡಿಸುವ ಕಾರ್ಯಕ್ರಮಗಳು, ಕಾನೂನು ಶಿಬಿರ ಹಾಗೂ ಮಾಜಿ ದೇವದಾಸಿ ಮಹಿಳೆಯರಿಗಾಗಿ ಆರೋಗ್ಯ ಶಿಬಿರಗಳನ್ನು ಕೈಗೊಳ್ಳಲಾಗುತ್ತಿದೆ.

**7. ಮಾಜಿ ದೇವದಾಸಿಯರಿಗೆ ಮಾಸಾಶನ:-**

45 ವರ್ಷ ಮೀರಿದ ಮಾಜಿ ದೇವದಾಸಿಯರಿಗೆ ಕನಿಷ್ಠ ಜೀವನ ನಡೆಸಲು ಸಹಕಾರಿಯಾಗುವಂತೆ, ರೂ. 1500/-ಗಳ ಮಾಸಾಶನವನ್ನು ನೀಡಲಾಗುತ್ತಿದೆ.

**8. ಮಹಿಳಾ ತರಬೇತಿ ಯೋಜನೆ:-**

ಆರ್ಥಿಕವಾಗಿ ಹಿಂದುಳಿದ ಮಹಿಳೆಯರು, ದಮನಿತ ಮಹಿಳೆಯರು ಮತ್ತು ವಿಶೇಷ ವರ್ಗದವರಿಗೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಮಹಿಳೆಯರಿಗೆ ಕೌಶಲ್ಯ ತರಬೇತಿ ನೀಡಿ, ಅವರಲ್ಲಿ ಉದ್ಯಮಶೀಲತೆಯನ್ನು ಬೆಳೆಸುವ ಗುರಿಯನ್ನು ಹೊಂದಲಾಗಿದೆ. ಸದರಿ ಯೋಜನೆಯನ್ನು ಇತರೆ ಯೋಜನೆಗೆ ವಿಲೀನಗೊಳಿಸಲಾಗಿದ್ದು, ಪ್ರತ್ಯೇಕಿಸಿ ಅನುದಾನ ಒದಗಿಸಲು ಸರ್ಕಾರಕ್ಕೆ ಕೋರಲಾಗಿದೆ.

**9. ಬಡ್ಡಿ ಸಹಾಯಧನ ಯೋಜನೆ (ಕರ್ನಾಟಕ ರಾಜ್ಯ ಆರ್ಥಿಕ ಹಣಕಾಸು ನಿಗಮ ಮೂಲಕ) :-**

ಕರ್ನಾಟಕ ರಾಜ್ಯ ಹಣಕಾಸು ನಿಗಮದ ಮೂಲಕ ಕನಿಷ್ಟ ರೂ.5.00 ಲಕ್ಷದಿಂದ ರೂ.200.00 ಲಕ್ಷಗಳ ಸಾಲವನ್ನು ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಶೇ. 10ರಷ್ಟು ಬಡ್ಡಿ ಸಹಾಯಧನವನ್ನು ಸಣ್ಣ/ ಮಧ್ಯಮ ಕೈಗಾರಿಕೆ ಹಾಗೂ ಸೇವಾ ಘಟಕಗಳನ್ನು ಪ್ರಾರಂಭಿಸಿ ಉದ್ಯೋಗ ಚಟುವಟಿಕೆಗಳಲ್ಲಿ ತೊಡಗುವ ಮಹಿಳಾ ಉದ್ದಿಮೆದಾರರನ್ನು ಪ್ರೋತ್ಸಾಹಿಸುವ ಸಲುವಾಗಿ ನೀಡಲಾಗುತ್ತಿದೆ.

**10. ಸಮೃದ್ಧಿ:-**

ಬೀದಿ ಬದಿಯಲ್ಲಿ ಸಣ್ಣ ವ್ಯಾಪಾರ ನಡೆಸುತ್ತಿರುವ ಬಡತನ ರೇಖೆಗಿಂತ ಕೆಳಗಿರುವ ಮಹಿಳೆಯರಿಗೆ ರೂ.10,000/-ಗಳ ಪ್ರೋತ್ಸಾಹಧನವನ್ನು ಒದಗಿಸಲಾಗುತ್ತದೆ. 2020-21ನೇ ಸಾಲಿನಿಂದ ಸರ್ಕಾರದಿಂದ ಅನುದಾನ ಹಂಚಿಕೆ ಆಗಿರುವುದಿಲ್ಲ.

**11. ಮಾಜಿ ದೇವದಾಸಿಯರಿಗೆ ವಸತಿ ಯೋಜನೆ :-**

ನಿವೇಶನವುಳ್ಳ ವಸತಿರಹಿತ ಮಾಜಿ ದೇವದಾಸಿ ಮಹಿಳೆಯರಿಗೆ ವಸತಿ ಯೋಜನೆಯನ್ನು ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮದ ಮುಖಾಂತರ ಘಟಕ ವೆಚ್ಚ ಗ್ರಾಮಾಂತರ ಪ್ರದೇಶದಲ್ಲಿ ರೂ.1.75 ಲಕ್ಷ ಹಾಗೂ ನಗರ ಪ್ರದೇಶದಲ್ಲಿ ರೂ.2.00 ಲಕ್ಷ ಅನುದಾನದಲ್ಲಿ ಅನುಷ್ಠಾನ ಮಾಡಲಾಗುತ್ತಿದೆ.

# ಅನುಬಂಧ-2

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

**ಕಳೆದ 3 ವರ್ಷಗಳಲ್ಲಿ ಈ ಕೆಳಕಂಡ ಯೋಜನೆಗಳಡಿ ಲಾಭ ಪಡೆದ ಫಲಾನುಭವಿಗಳ ವಿವರ (2019-20 ರಿಂದ 2022-23 ನವೆಂಬರ್ ಅಂತ್ಯದವರೆಗೆ)**

| ಕ್ರ. ಸಂ | ಯೋಜನೆ ಹೆಸರು | ಕೇಂದ್ರಗಳಲ್ಲಿ/ಕಾಯ್ದೆಯಡಿ ದಾಖಲಾದ ಫಲಾನುಭವಿ/ಪ್ರಕರಣಗಳ/ಸ್ವೀಕೃತ ಕರೆಗಳ ಸಂಖ್ಯೆ | | | |
|---|---|---|---|---|---|
| | | 2019-20 | 2020-21 | 2021-22 | 2022-23 (ನವೆಂಬರ್-2022ರ ಅಂತ್ಯಕ್ಕೆ) |
| 1 | ಸಾಂತ್ವನ | 66401 | 94555 | 19950 | 13766 |
| 2 | ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ | 3536 | 10345 | 4053 | 3390 |
| 3 | ಸ್ವಾಧಾರಗೃಹ | 1664 | 1590 | 1590 | 1734 |
| 4 | ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ನಿವಾರಣೆ ಯೋಜನೆ | ಈ ಯೋಜನೆಯು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮವಾಗಿರುತ್ತದೆ. | | | |
| 5 | ಉಜ್ವಲ ಯೋಜನೆ | 416 | 376 | 425 | - |
| 6 | ಸ್ವೀಕಾರ ಕೇಂದ್ರ ಹಾಗೂ ರಾಜ್ಯ ಮಹಿಳಾ ನಿಲಯ | ಸದರಿ ಯೋಜನೆಯು ಫಲಾನುಭವಿ ಆಧಾರಿತ ಯೋಜನೆಯಾಗಿರುವುದಿಲ್ಲ | | | |
| 7 | ಸ್ತ್ರೀಶಕ್ತಿ ಯೋಜನೆ | 7729 | 11843 | 8745 | - |

**ಕಳೆದ 3 ವರ್ಷಗಳಲ್ಲಿ ಆಯವ್ಯಯದಲ್ಲಿ ಮೀಸಲಿರಿಸಿಟ್ಟ ಹಣ ಹಾಗೂ ಆ ಪೈಕಿ ಖರ್ಚಾದ ಹಣದ ವಿವರ**

| ಕ್ರ. ಸಂ | ಯೋಜನೆ ಹೆಸರು | ಮೀಸಲಿರಿಸಿಟ್ಟ ಅನುದಾನ ಹಾಗೂ ಖರ್ಚಾದ ಅನುದಾನದ ಮಾಹಿತಿ (ರೂ.ಲಕ್ಷಗಳಲ್ಲಿ) | | | | | | | |
|---|---|---|---|---|---|---|---|---|---|
| | | 2019-20 | | 2020-21 | | 2021-22 | | 2022-23 (ನವೆಂಬರ್-2022ರ ಅಂತ್ಯಕ್ಕೆ) | |
| | | ಮೀಸಲಿರಿಸಿಟ್ಟ ಅನುದಾನ | ಖರ್ಚಾದ ಅನುದಾನ | ಮೀಸಲಿರಿಸಿಟ್ಟ ಅನುದಾನ | ಖರ್ಚಾದ ಅನುದಾನ | ಮೀಸಲಿರಿಸಿಟ್ಟ ಅನುದಾನ | ಖರ್ಚಾ ಅನುದಾನ | ಮೀಸಲಿರಿಸಿಟ್ಟ ಅನುದಾನ | ಖರ್ಚಾದ ಅನುದಾನ |
| 1 | ಸಾಂತ್ವನ | 1380.00 | 1246.87 | 1200.00 | 1195.00 | 816.00 | 811.00 | 1230.00 | 282.12 |

| | | | | | | | | | |
|---|---|---|---|---|---|---|---|---|---|
| 2 | ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ | 723.50 | 723.50 | 706.67 | 706.67 | 687.70 | 687.70 | 1280.71 | 543.66 |
| 3 | ಸ್ವಾಧಾರಗೃಹ | 694.12 | 694.12 | 454.75 | 454.75 | 721.19 | 721.19 | 640.00 | 522.69 |
| 4 | ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ನಿವಾರಣೆ ಯೋಜನೆ | 30.00 | 29.88 | 30.00 | 16.97 | 30.00 | 28.35 | - | - |
| 5 | ಉಜ್ವಲ ಯೋಜನೆ | 126.56 | 126.56 | 123.83 | 123.83 | 295.50 | - | - | - |
| 6 | ಸ್ವೀಕಾರ ಕೇಂದ್ರ ಹಾಗೂ ರಾಜ್ಯ ಮಹಿಳಾ ನಿಲಯ | 758.50 | 682.35 | 778.82 | 676.97 | 835.52 | 762.27 | 641.04 | 305.33 |
| 7 | ಸ್ತ್ರೀಶಕ್ತಿ ಯೋಜನೆ | 854.29 | 703.47 | 506.53 | 466.78 | 8523.04 | 8300.05 | - | - |

## ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ

### ಕಳೆದ ಮೂರು ವರ್ಷಗಳಲ್ಲಿ ಕೆಳಕಂಡ ಯೋಜನೆಗಳಡಿ ಮೀಸಲಿರಿಸಿದ ಅನುದಾನ, ಖರ್ಚು, ಲಾಭ ಪಡೆದ ಫಲಾನುಭವಿ ಸಂಖ್ಯೆಯ ವಿವರ

| ಕ್ರಸಂ | ಯೋಜನೆಯ ಹೆಸರು | ವರ್ಷ | | | | | | | | | | | |
|---|---|---|---|---|---|---|---|---|---|---|---|---|---|
| | | 2019–20 | | | | 2020–21 | | | | 2021–22 | | | |
| | | ಗುರಿ | | ಸಾಧನೆ | | ಗುರಿ | | ಸಾಧನೆ | | ಗುರಿ | | ಸಾಧನೆ | |
| | | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ |
| 1 | ಉದ್ಯೋಗಿನಿ | 4557 | 2530.00 | 4557 | 2530.00 | 1812 | 2000.00 | 1812 | 2000.00 | 1479 | 1500.00 | 1479 | 1500.00 |
| 2 | ಕಿರುಸಾಲ | 250 | 500.00 | 208 | 416.00 | 408 | 2500.00 | 206 | 650.00 | 150 | 300.00 | 100 | 200.00 |
| 3 | ಲಿಂಗತ್ವಅಲ್ಪಸಂಖ್ಯಾತರ ಪುನರ್ವಸತಿ | 808 | 410.00 | 709 | 359.82 | 454 | 300.00 | 454 | 230.40 | 976 | 300.00 | 805 | 247.54 |
| 4 | ಚೇತನ | 304 | 205.00 | 304 | 205.00 | 795 | 400.00 | 600 | 263.90 | 655 | 200.00 | 620 | 190.65 |
| 5 | ಧನಶ್ರೀ | 985 | 500.00 | 985 | 500.00 | 396 | 200.00 | 396 | 200.00 | 651 | 200.00 | 575 | 177.00 |
| 6 | ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ | 589 | 830.00 | 589 | 830.00 | 790 | 614.00 | 790 | 614.00 | 469 | 335.00 | 473 | 325.82 |
| 7 | ಮಾಜಿ ದೇವದಾಸಿಯರಿಗೆ ಮಾಸಾಶನ | 30288 | 4772.00 | 30130 | 4772.00 | 30201 | 5423.40 | 30130 | 5423.40 | 30200 | 5436.00 | 26966 | 4947.00 |
| 8 | ಮಹಿಳಾ ತರಬೇತಿ | 2333 | 350.00 | 2333 | 350.00 | 1000 | 100.00 | 0 | 0.00 | 312 | 50.00 | 0 | 0.00 |

| | | | | | | | | | | | |
|---|---|---|---|---|---|---|---|---|---|---|---|
| 9 | ಬಡ್ಡಿ ಸಹಾಯಧನ ಯೋಜನೆ (ಕರ್ನಾಟಕ ರಾಜ್ಯ ಆರ್ಥಿಕ ಹಣಕಾಸು ನಿಗಮ ಮೂಲಕ) | 300 | 1000.00 | 300 | 1000.00 | 1175 | 5000.00 | 1175 | 5000.00 | 1389 | 5800.00 | 1389 | 5800.00 |
| 10 | ಸಮೃದ್ಧಿ | 3000 | 300.00 | 2500 | 250.00 | ಅನುದಾನ ಒದಗಿಸಿರುವುದಿಲ್ಲ | | | | | | | |
| 11 | ಮಾಜಿ ದೇವದಾಸಿಯರ ವಸತಿ | 796 | 1417.00 | 796 | 1417.00 | | | | | | | | |
| **ಒಟ್ಟು** | | **44210** | **12814.00** | **43411** | **12629.82** | **37031** | **16537.40** | **35563** | **14381.70** | **36281** | **14121.00** | **32407** | **13388.01** |